ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕರ್ನಾಟಕ ಸಚಿವಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

743 (703) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದ ಸಚಿವಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಕಛೇರಿ ವೇಳೆಯಲ್ಲಿ ಹೊರಗಡೆ ಹೋಗುವುದು, ಕಛೇರಿ ವೇಳೆಯಲ್ಲಿಯೇ ಸ್ವಂತ ಕೆಲಸಕಾರ್ಯಗಳನ್ನು ಮಾಡುತ್ತಿರುವ ಬಗ್ಗೆ ಇತ್ತೀಚೆಗೆ ಕೆಲವು ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಇದೇ ರೀತಿ ಕೋರ್ಟ್‌ಗಳಿಂದ ಬಂದ ನೋಟಿಸ್‌ಗಳಿಗೆ /ಸಮನ್ಸ್‌ಗಳಿಗೆ ನಿರ್ಲಕ್ಷ್ಯ ವಹಿಸಿ ನ್ಯಾಯಾಲಯಗಳ ಆದೇಶ ಪಾಲಿಸದೆ ಇತ್ತೀಚೆಗೆ ಸಚಿವಾಲಯದ ಅಧಿಕಾರಿಯನ್ನು ಅರೆಸ್ಟ್ ಮಾಡಲು ಪೊಲೀಸರು ಸಚಿವಾಲಯದ ಕಛೇರಿಗೆ ಹೋಗಿರುವ ಘಟನೆ ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಘಟನೆಯ ವಿವರ ನೀಡುವುದು ಮತ್ತು ಇದಕ್ಕೆ ಕಾರಣರಾದ ಅಧಿಕಾರಿ/ನೌಕರರ ಮೇಲೆ ಸರ್ಕಾರ ಜರುಗಿಸಿರುವ ಕ್ರಮವೇನು ; (ಸಂಪೂರ್ಣ ವಿವರ ನೀಡುವುದು)

(ಉ) ಈ ಎಲ್ಲಾ ಘಟನೆಗಳ ಬಗ್ಗೆ ಅಧಿಕಾರಿ/ನೌಕರರಿಗೆ ಎಚ್ಚರಿಕೆ ನೀಡಲು ಸರ್ಕಾರ ಸುತ್ತೋಲೆ ಹೊರಡಿಸಿರುವುದೆ ; ಹಾಗಿದ್ದಲ್ಲಿ, ಅದರ ಪ್ರತಿಯನ್ನು ಒದಗಿಸುವುದು ?